**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು ಃ- ಶ್ರೀ ವಿ ಎಸ್ ಎಸ್ ವಕೀಲರಿಂದ 2 ನೇ ಎದುರುದಾರರ ಪರವಾಗಿ**

6. ನಾನು ಬಾಡಿಗೆ ಕಾರ್ ನಲ್ಲಿ ಅಪಘಾತವಾದ ದಿನ ಬರುತ್ತಿದ್ದೆ ಎಂದರೆ ಸರಿಯಲ್ಲ. ನನ್ನ ಗೆಳೆಯನ ತಂದೆ ಗುರುಸ್ವಾಮಿ ವಾಹನ ಚಾಲಯಿಸುತ್ತಿದ್ದರು. ಅವರಿಗೆ ಚಾಲನಾ ಪರವಾನಿಗೆ ಪತ್ರ ಇರಲಿಲ್ಲ ಎಂದರೆ ಸರಿಯಲ್ಲ. ಮುಂದುಗಡೆ ಹೋಗುತ್ತಿದ್ದ ಲಾರಿಯ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಸದರಿ ಲಾರಿ ಸಿಗದೇ ಇರುವುದರಿಂದ ನನ್ನ ಗೆಳೆಯ ತಂದೆಯ ಮೇಲೆ ನಾನು ದೂರನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಕಾರಿನ ಮಾಲೀಕರು ನನ್ನ ಗೆಳೆಯನ ಮಾವ ಭೀಮಪ್ಪ ಇರುತ್ತಾರೆ. ಬಾಡಿಗೆಗೆ ಕಾರನ್ನು ತೆಗೆದುಕೊಂಡು ಹೋಗಿರುತ್ತೇವೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

7. ವೈದ್ಯರು ನನಗೆ ಸಣ್ಣ ಪುಟ್ಟ ಗಾಯಗಳು ಆಗಿರುತ್ತವೆ ಎಂದು ಗಾಯದ ಪ್ರಮಾಣ ಪತ್ರ ನೀಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ತಂದೆ ಅಪಘಾತದ ಬಗ್ಗೆ ದೂರನ್ನು ದಾಖಲಿಸಿರುತ್ತಾರೆ. ಒಂದು ದಿನ ತಾವಾಗಿ ದೂರನ್ನು ದಾಖಲಿಸಲಾಗಿದೆ ಎಂದರೆ ಸರಿ. ನನ್ನ ಪ್ರಮಾಣ ಪತ್ರ ದಲ್ಲಿ ಹೇಳಿರುವ ಹಾಗೆ ನನಗೆ ಯಾವುದೇ ತೀವ್ರ ಸ್ವರೂಪದ ಗಾಯಗಳು ಆಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ವೈದರೊಂದಿಗೆ ಶರೀಖ್ ಆಗಿ ಸುಳ್ಳು ಅಂಗನ್ಯೂನ್ಯತೆ ಪ್ರಮಾಣ ಪತ್ರ ವನ್ನು ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ.

8. ನನ್ನ ವೈದ್ಯಕೀಯ ಚಿಕಿತ್ಸೆಗೆ ರೂ.4,00,000/- ಖರ್ಚು ಆಗಿರುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮುಂದುವರೆದ ಚಿಕಿತ್ಸೆಗೆ ರೂ.1,00,000/- ಅವಶ್ಯಕತೆ ಇರುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈಗ ನಾನು ಯಾವುದೇ ಕೆಲಸ ಮಾಡುತ್ತಿಲ್ಲ. ನನಗೆ ತಿಂಗಳಿಗೆ ರೂ.30,000/- ಆದಾಯ ಇತ್ತು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಲಾರಿ ಚಾಲಕನ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪರಿಹಾರ ಪಡೆಯ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ. ಇದೆ.

2 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಎ.ಎಂ.ಎ.ಸಿ.ಟಿ, ಚಿತ್ರದುರ್ಗ